# ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ಕರ್ನಾಟಕ

ನಂ:1/14, 2ನೇ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ.ಕಾಂಪೌಂಡ್,
3ನೇ ಕ್ರಾಸ್, ಮಿಷನ್ ರಸ್ತೆ, ಬೆಂಗಳೂರು-560027

ಸಂಖ್ಯೆ: ರೇರಾ/ಆಡಳಿತ/14/2018-19 ದಿನಾಂಕ: 13.11.2020

ವಿಷಯ: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ಆಂತರಿಕ ದೂರು ನಿರ್ವಹಣಾ ಸಮಿತಿಯನ್ನು ರಚಿಸುವ ಕುರಿತು

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ: ಮಮಇ/28/ರಾಮಆ/2015 ದಿನಾಂಕ: 18-11-2015
2) ಸರ್ಕಾರದ ಪತ್ರ ಸಂಖ್ಯೆ: ಡಿಓಹೆಚ್ 128 ಆರ್ಐ 2020 ದಿನಾಂಕ: 11-09-2020

******

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ, 2013ನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿರುತ್ತದೆ. ಈ ಅಧಿನಿಯಮದನ್ವಯ ಸರ್ಕಾರದ ಎಲ್ಲಾ ಕಚೇರಿಗಳು, ನಿಗಮ, ಮಂಡಳಿ, ಸಾರ್ವಜನಿಕ ಉದ್ಯಮಗಳು, ಫ್ಯಾಕ್ಟರಿಗಳು ಮತ್ತು ಖಾಸಗಿ ವಲಯಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿರುತ್ತದೆ. ಅದರಂತೆ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಅಧಿಕಾರಿ/ಸಿಬ್ಬಂದಿಗಳಿಗೆ ಹಲವಾರು ಸಂದರ್ಭದಲ್ಲಿ ವಿನಾಕಾರಣ ಕಿರುಕುಳ ನೀಡುವುದು, ಅಸಭ್ಯವಾಗಿ ವರ್ತಿಸುವುದು ಮತ್ತು ಅವರ ಮೇಲೆ ನಡೆಯುವ ಲೈಂಗಿಕ ಕಿರುಕುಳಗಳಿಗೆ ಸಂಬಂಧಪಟ್ಟ ದೂರುಗಳನ್ನು ಪರಿಣಾಮಕಾರಿ ಮತ್ತು ತ್ವರಿತವಾಗಿ ಪರಿಹರಿಸಲು ಆಂತರಿಕ ದೂರು ನಿರ್ವಹಣಾ ಸಮಿತಿಯನ್ನು ರಚಿಸಲು ಹಾಗೂ ನೋಡಲ್ ಅಧಿಕಾರಿಯನ್ನು ನೇಮಿಸಲು ತೀರ್ಮಾನಿಸಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಪತ್ರದಲ್ಲಿ, Sexual Harassment of Woman at Workplace (Prevention, Prohibition and Redressal) Act 2013ರ ಅಧಿನಿಯಮಕ್ಕೆ ಸಂಬಂಧಿಸಿದಂತೆ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಹಾಗೂ ಈ ಬಗ್ಗೆ ನೋಡಲ್ ಅಧಿಕಾರಿಯನ್ನು ನೇಮಿಸಿ ಸರ್ಕಾರಕ್ಕೆ ವರದಿ ನೀಡುವಂತೆ ಕೋರಲಾಗಿರುತ್ತದೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಅಧಿಕಾರಿ/ಸಿಬ್ಬಂದಿಯವರ ಮೇಲೆ ಲೈಂಗಿಕ ಕಿರುಕುಳಕ್ಕೆ ಸಂಬಂಧಿಸಿದಂತೆ ಸ್ವೀಕೃತವಾಗುವ ದೂರುಗಳನ್ನು ಬಗೆಹರಿಸಲು ಹಾಗೂ ಕಿರುಕುಳಗಳನ್ನು ತಡೆಯಲು, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ 2013ರ ಕಲಂ 4(1)ರನ್ವಯ ಈ ಕೆಳಕಂಡ ಸದಸ್ಯರುಗಳು, ನೋಡಲ್ ಅಧಿಕಾರಿಗಳನ್ನೊಳಗೊಂಡಂತೆ ಆಂತರಿಕ ದೂರು ನಿರ್ವಹಣಾ ಸಮಿತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ರಚಿಸಿ, ಆದೇಶಿಸಲಾಗಿದೆ.

**ಕಚೇರಿ ಆದೇಶ ಸಂಖ್ಯೆ: ರೇರಾ/ಆಡಳಿತ/14/2018-19 ದಿನಾಂಕ: 13.11.2020**

| ಕ್ರ.ಸಂ. | ಹೆಸರು ಮತ್ತು ಹುದ್ದೆ | ಆಂತರಿಕ ದೂರು ಸಮಿತಿ |
|---|---|---|
| 1 | ಶ್ರೀಮತಿ ಕೆ.ಎಸ್. ಲತಾಕುಮಾರಿ, ಭಾ.ಆ.ಸೇ. | ಅಧ್ಯಕ್ಷರು |
| 2 | ಶ್ರೀಮತಿ ಬಿ.ವೀಣಾ ಪ್ರ.ದ.ಸ, | ಸದಸ್ಯರು |
| 3 | ಕುಮಾರಿ ಎಸ್.ಜಯಶ್ರೀ ಶೀಘ್ರಲಿಪಿಗಾರರು, | ಸದಸ್ಯರು |
| 4 | ಶ್ರೀಮತಿ.ಎಸ್.ಸೌಮ್ಯ, ದ್ವಿ.ದ.ಸ, | ಸದಸ್ಯ ಕಾರ್ಯದರ್ಶಿ ಹಾಗೂ ನೋಡಲ್ ಅಧಿಕಾರಿ |

ಆಂತರಿಕ ದೂರು ನಿರ್ವಹಣಾ ಸಮಿತಿಯು ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ 2013 ಮತ್ತು ಸರ್ಕಾರದ ಆದೇಶ ಸಂಖ್ಯೆ: ಮಮಇ/28/ರಾಮಅ/2015, ದಿನಾಂಕ:18-11-2015ರಲ್ಲಿ ಸೂಚಿಸಿರುವ ಮಾರ್ಗಸೂಚಿ ಹಾಗೂ ಆಗಿಂದಾಗ್ಗೆ ಭಾರತ ಸರ್ಕಾರ ಮತ್ತು ರಾಜ್ಯ ಸರ್ಕಾರವು ಹೊರಡಿಸುವ ಮಾರ್ಗಸೂಚಿ/ಆದೇಶಗಳನ್ವಯ ಕಾರ್ಯನಿರ್ವಹಿಸತಕ್ಕದ್ದು ಹಾಗೂ ಸಮಿತಿಗೆ ಸಲ್ಲಿಸಲ್ಪಡುವ ದೂರುಗಳನ್ನು ನಿಯಮಗಳಲ್ಲಿ ನಿಗದಿಪಡಿಸಿರುವ ಅವಧಿಯೊಳಗಾಗಿ ಇತ್ಯರ್ಥಪಡಿಸುವುದು.

ಕಾರ್ಯದರ್ಶಿ,
ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ

ಪ್ರತಿ ಮಾಹಿತಿಗಾಗಿ:-

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2 ಸರ್ಕಾರದ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3 ಶ್ರೀಮತಿ.ಪ್ರಮೀಳಾ ನಾಯ್ಡು, ಅಧ್ಯಕ್ಷರು, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ನಂ.107, ಕಾವೇರಿ ಭವನ, 1ನೇ ಮಹಡಿ, ಕರ್ನಾಟಕ ಗೃಹ ಮಂಡಳಿ ಕಟ್ಟಡ, ಕೆ.ಜಿ.ರಸ್ತೆ, ಬೆಂಗಳೂರು.
4 ಮಾನ್ಯ ಅಧ್ಯಕ್ಷರ ಆಪ್ತ ಕಾರ್ಯದರ್ಶಿರವರಿಗೆ-ಮಾನ್ಯ ಅಧ್ಯಕ್ಷರ ಅವಗಾಹನೆಗೆ ತರಲು ಕೋರಿದೆ.
5 ನ್ಯಾಯ ನಿರ್ಣಯಾಧಿಕಾರಿಗಳು, ಕಾನೂನು ಶಾಖೆ, ರೇರಾ.
6 ಉಪ ಕಾರ್ಯದರ್ಶಿ, ರೇರಾ
7 ಹಣಕಾಸು ನಿಯಂತ್ರಕರು, ಲೆಕ್ಕ ಶಾಖೆ, ರೇರಾ.
8 ಕಾರ್ಯಪಾಲಕ ಅಭಿಯಂತರರು, ಇಂಜಿನಿಯರಿಂಗ್ ಶಾಖೆ, ರೇರಾ.
9 ಅಧೀನ ಕಾರ್ಯದರ್ಶಿ, ಆಡಳಿತ ಶಾಖೆ, ರೇರಾ.
10 ಲೆಕ್ಕಾಧಿಕಾರಿ, ರೇರಾ.
11 ತಹಶೀಲ್ದಾರ್, ರೇರಾ.
12 ಶಾಖಾಧಿಕಾರಿಗಳು-1 ಮತ್ತು 2, ರೇರಾ.
13 ಕಂದಾಯ ಸಮಾಲೋಚಕರು, ಕಂದಾಯ ಶಾಖೆ, ರೇರಾ.
14 ಕಾನೂನು ಸಲಹೆಗಾರರು, ರೇರಾ.
15 ತಾಂತ್ರಿಕ ಶಾಖೆ (ಐ.ಟಿ), ರೇರಾ.
16 ಕಚೇರಿಯ ರಕ್ಷಾ ಕಡತ.